ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಉಪ ಸಮಿತಿ) (ಜಿಂದಾಲ್)

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 09/07/2019

ಮಹತ್ವದ ಸಭೆ | ಭೂಮಿ ನೀಡುವ ಸರ್ಕಾರದ ನಿರ್ಧಾರದ ಬಗ್ಗೆ ಪರಿಶೀಲನೆ

# ಜಿಂದಾಲ್: ಸಭೆ ನಡೆಸಿ ದಾಖಲೆ ಪರಿಶೀಲಿಸಿದ ಎಂಬಿಪಾ ಸಮಿತಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 9/7/19

ರಾಜ್ಯ ರಾಜಕೀಯ ಬೆಳವಣಿಗೆಗಳ ನಡುವೆಯೇ ಜಿಂದಾಲ್ ಕಂಪನಿಗೆ ಸರ್ಕಾರಿ ಭೂಮಿ ಮಾರಾಟ ವಿವಾದ ಇತ್ಯರ್ಥಕ್ಕಾಗಿ ರಾಜ್ಯ ಸರ್ಕಾರ ರಚಿಸಿರುವ ಗೃಹ ಸಚಿವ ಎಂ.ಬಿ.ಪಾಟೀಲ್ ನೇತೃತ್ವದ ಸಚಿವ ಸಂಪುಟ ಉಪಸಮಿತಿಯು ಸಭೆ ನಡೆಸಿ ದಾಖಲೆಗಳನ್ನು ಪರಿಶೀಲಿಸಿ, ನಡೆಸಿ ಹಲವು ಮಾಹಿತಿಯನ್ನು ಕಲೆ ಹಾಕಿದೆ.



ಸಮಿತಿ ರಚನೆಯಾದ ಬಳಿಕ ಸೋಮವಾರ ವಿಧಾನಸೌಧದಲ್ಲಿ ಮೊದಲ ಸಭೆ ನಡೆಯಿತು. ಸಭೆಯಲ್ಲಿ ಜಿಂದಾಲ್ ಕಂಪನಿಗೆ ಸರ್ಕಾರ ಈ ಹಿಂದೆ ಎಷ್ಟೆಷ್ಟು ಭೂಮಿ ನೀಡಲಾಗಿದೆ ಎಂಬುದರ ಬಗ್ಗೆ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ಅಲ್ಲದೇ, ಜಿಂದಾಲ್ ಕಂಪನಿ ವಿರುದ್ಧ ಯಾವುದಾದರೂ ದೂರುಗಳು ಬಂದಲ್ಲಿ ಅವುಗಳನ್ನು ಸ್ವೀಕರಿಸಿ ಪರಿಶೀಲನೆ ನಡೆಸುವಂತೆ ನಿರ್ದೇಶನ ನೀಡಲಾಯಿತು. ಜಿಂದಾಲ್ ಕಂಪನಿಗೆ ಭೂಮಿ ನೀಡಿರುವ ಬಗ್ಗೆ ದಾಖಲೆಗಳನ್ನು ಸಮಿತಿ ಪರಿಶೀಲನೆ ನಡೆಸಿತು.

ಬಳ್ಳಾರಿ ಜಿಲ್ಲೆಯಲ್ಲಿ 3,667 ಎಕರೆ ಭೂಮಿಯನ್ನು ಜಿಂದಾಲ್ ಕಂಪನಿಗೆ ಲೀಸ್ ಕಮ್ ಡೀಡ್ ಮಾಡಿಕೊಡಲು ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸಚಿವ ಸಂಪುಟ ಉಪಸಮಿತಿ ರಚಿಸಲಾಗಿದೆ. ಸಮ್ಮಿಶ್ರ ಸರ್ಕಾರದ ಉಳಿವಿಗಾಗಿ ಕಾಂಗ್ರೆಸ್‌ನ ಎಲ್ಲಾ ಸಚಿವರು ಸೋಮವಾರ ಬೆಳಗ್ಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು. ರಾಜೀನಾಮೆ ಸಲ್ಲಿಸಿದ ಬಳಿಕವೂ ಮಧ್ಯಾಹ್ನ ವಿಧಾನಸೌಧಕ್ಕೆ ತೆರಳಿದ ಸಚಿವರು ಉಪಸಮಿತಿ ಸಭೆ ನಡೆಸಿದರು. ಸರ್ಕಾರವನ್ನು ಉಳಿಸಿಕೊಳ್ಳು ರಾಜೀನಾಮೆ ನೀಡಿದರೂ ಸಭೆ ನಡೆಸಲು ಯಾವ ನೈತಿಕತೆ ಇದೆ ಎಂಬ ಪ್ರಶ್ನೆಗಳು ಕೇಳಿ ಬಂದಿವೆ.

ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲಾಗಿದೆಯೋ ಹೊರತು ಇನ್ನೂ ಅಂಗೀಕಾರವಾಗಿಲ್ಲ. ಮುಖ್ಯಮಂತ್ರಿಗಳು ಸಚಿವರ ರಾಜೀನಾಮೆಯನ್ನು ರಾಜ್ಯಪಾಲರಿಗೆ ಕಳುಹಿಸಿ ಅಂಗೀಕರಿಸುವಂತೆ ಮನವಿ ಮಾಡಬೇಕು. ರಾಜ್ಯಪಾಲರು ರಾಜೀನಾಮೆಗಳನ್ನು ಅಂಗೀಕರಿಸಿದ ಬಳಿಕವಷ್ಟೇ ಸಚಿವ ಸ್ಥಾನ ಇರುವುದಿಲ್ಲ. ಅಲ್ಲಿವರೆಗೆ ಸ್ಥಾನ ಇರುತ್ತದೆ. ಸಭೆಯು ಮೊದಲೇ ನಿಗದಿಯಾಗಿದ್ದರಿಂದ ಸಚಿವರು ತಮ್ಮ ಕರ್ತವ್ಯ ನಿರ್ವಹಿಸಿದ್ದಾರೆ ಎಂದರು.